**ಹಿರಿಯ ದಿವಾಣಿ ನ್ಯಾಯಾಧೀಶರ ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ತಿ. ನರಸೀಪುರ**

**ಸಿಸಿ ಸಂಖ್ಯೆ: 336/2024**

ಚಾ.ಸಾ–10, ಪ್ರಾ.ಸಾ–05

| | | |
|---|---|---|
| ಹೆಸರು | : | ಅಶೋಕ್‌ಕುಮಾರ್ |
| ತಂದೆಯ ಹೆಸರು | : | ಲೇಟ್ ಬೈರಪ್ಪ |
| ವಯಸ್ಸು | : | 61 |
| ವೃತ್ತಿ | : | ನಿವೃತ್ತ ಪೊಲೀಸ್ ಉಪನಿರೀಕ್ಷರು |
| ವಾಸ | : | ಮೈಸೂರು |

**ದಿನಾಂಕ 07.03.2026 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

[

**ಮುಖ್ಯ ವಿಚಾರಣೆಃ ಮಾನ್ಯ ಎಪಿಪಿ ರವರಿಂದಃ**

ನಾನು ತಿ. ನರಸೀಪುರ ಪೊಲೀಸ್ ಠಾಣೆಯಲ್ಲಿ 2022 ರಿಂದ 2025 ರವರೆಗೆ ಪೊಲೀಸ್ ಉಪ ನಿರೀಕ್ಷನಾಗಿ ಕರ್ತವ್ಯ ನಿರ್ವಹಿಸಿದ್ದೆನು.

ದಿನಾಂಕ 03.07.2024 ರಂದು ಚಾಸಾ–11 ರವರಿಂದ ಪ್ರಕರಣದ ಕಡತವನ್ನು ಮುಂದಿನ ತನಿಖೆಗೆ ಪಡೆದಿರುತ್ತೇನೆ.

ಅದೇ ದಿನ ನ್ಯಾಯಾಲಯದ ಆದೇಶದಂತೆ ಪ್ರಾಸಾ–1 ರವರಿಗೆ ಚಿನ್ನದ ಉಂಗುರವನ್ನು ಬಿಡುಗಡೆ ಮಾಡಿರುತ್ತೇನೆ. ಆ ವೇಲೆಗೆ ಪಂಚನಾಮವನ್ನು ಜರುಗಿಸಿ, ಭಾವಚಿತ್ರವನ್ನು ಪಡೆಯಲಾಯಿತು. ಆ ಪಂಚನಾಮ ಮತ್ತು ಅದರಲ್ಲಿರುವ ನನ್ನ ಸಹಿಯನ್ನು ಈಗ ನೋಡಿ ಗುರುತಿಸಿರುತ್ತೇನೆ. ಅವುಗಳನ್ನು ಕ್ರಮವಾಗಿ ನಿಪಿ.8 ಮತ್ತು 8(ಎ) ಎಂದು ಗುರುತಿಸಲಾಯಿತು. ಆ ಭಾವಚಿತ್ರ

ಮತ್ತು ಅದರ ಸಿ.ಡಿ.ಯನ್ನು ಈಗ ನೋಡಿ ಗುರುತಿಸಿರುತ್ತೇನೆ. ಅವುಗಳನ್ನು ನಿಪಿ.9 ಮತ್ತು 10 ಎಂದು ಗುರುತಿಸಲಾಯಿತು.

ದಿನಾಂಕ 25.07.2024 ರಂದು ಚಾಸಾ-9 ರವರಿಂದ ಸದರಿ ಪಂಚನಾಮದ ವೇಳೆಗೆ ತೆಗೆದ ಭಾವಚಿತ್ರದ ಕುರಿತು ಮತ್ತು ಇತರ ಭಾವಚಿತ್ರಗಳ ಕುರಿತು ಭಾರತೀಯ ಸಾಕ್ಷ್ಯ ಅಧಿನಿಯಮದಡಿಯಲ್ಲಿ ಪ್ರಮಾಣ ಪತ್ರವನ್ನು ಪಡೆದುಕೊಂಡಿರುತ್ತೇನೆ. ಅದನ್ನು ಮತ್ತು ಅದರಲ್ಲಿರುವ ನನ್ನ ಸಹಿಯನ್ನು ಈಗ ನೋಡಿ ಗುರುತಿಸಿರುತ್ತೇನೆ. ಅವುಗಳನ್ನು ಕ್ರಮವಾಗಿ ನಿಪಿ.11 ಮತ್ತು 11(ಎ) ಎಂದು ಗುರುತಿಸಲಾಯಿತು.

ತನಿಖೆಯನ್ನು ಪೂರೈಸಿ ಆರೋಪಿತರ ವಿರುದ್ಧ ದೋಷಾರೋಪಣಾ ಪಟ್ಟಿ ನ್ಯಾಯಾಲಯಕ್ಕೆ ಸಲ್ಲಿಸಿರುತ್ತೇನೆ.

**ಪಾಟೀ ಸವಾಲು : ಶ್ರೀ ಎಂ.ಆರ್. ವಕೀಲರಿಂದ ಆರೋಪಿತನ ಪರವಾಗಿ**

ನಿಪಿ.8 ರ ವೇಳೆಗೆ ಪಂಚರಾದ ರಾಜು ಮತ್ತು ಫ್ರಾಸಾ-2 ರವರು ಇದ್ದರು. ಫ್ರಾಸಾ-1 ರವರಿಗೆ ಸಹಾಯ ಮಾಡಲು ಆರೋಪಿತನ ವಿರುದ್ಧ ಸುಳ್ಳು ದೋಷಾರೋಪಣಾ ಸಲ್ಲಿಸಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆ ಇಲ್ಲ.**

(ತೆ ನ್ಯಾದಲ್ಲಿ ಬೆರಳಚ್ಚುಗೊಳಿಸಲಾಯಿತು)
ಓ ಹೇ ಕೇ ಸರಿ ಇದೆ

**ಹಿರಿಯ ದಿವಾಣಿ ನ್ಯಾಯಾಧೀಶರು**
**ಮತ್ತು ಪ್ರ.ದ.ನ್ಯಾದಂ., ತಿ.ನರಸೀಪುರ**